ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 147 ಸೇಅನೇ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 27.01.2015.

## ಸುತ್ತೋಲೆ

ವಿಷಯ: ಅನುಕಂಪದ ಆಧಾರದ ಮೇಲೆ ನೇಮಕಾತಿ– ಪಿ.ಯು.ಸಿ. ಕೋರ್ಸ್‌ನ ತತ್ಸಮಾನ ಕೋರ್ಸುಗಳ ಬಗ್ಗೆ ಮಾಹಿತಿ ನೀಡುವ ಬಗ್ಗೆ.

ಉಲ್ಲೇಖ: ಅಧಿಸೂಚನೆ ಸಂಖ್ಯೆ: ಸಿಆಸುಇ 18 ಸೇವನೆ 2013 ದಿನಾಂಕ: 13.12.2013.

****

ಮೇಲೆ ಉಲ್ಲೇಖಿಸಿದ ದಿನಾಂಕ: 13.12.2013ರ ಅಧಿಸೂಚನೆಯಲ್ಲಿ ಕರ್ನಾಟಕ ಸಿವಿಲ್ ಸೇವಾ (ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು, 1978ರ ನಿಯಮ 4ಕ್ಕೆ ತಿದ್ದುಪಡಿ ಮಾಡಿ ಕಿರಿಯ ಸಹಾಯಕ/ ದ್ವಿತೀಯ ದರ್ಜೆ ಸಹಾಯಕರ ನೇರ ನೇಮಕಾತಿಗೆ "ಪದವಿಪೂರ್ವ ಶಿಕ್ಷಣ ಪರೀಕ್ಷೆ ಅಥವಾ ಅದರ ತತ್ಸಮಾನ ವಿದ್ಯಾರ್ಹತೆ" ಎಂದು ತಿದ್ದುಪಡಿ ಮಾಡಲಾಗಿದೆ. ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು, 1996ರನ್ವಯ ಕಿರಿಯ ಸಹಾಯಕರು/ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಮಾಡುವ ನೇರ ನೇಮಕಾತಿಗಳಲ್ಲಿ ಪದವಿಪೂರ್ವ ಶಿಕ್ಷಣ ಪರೀಕ್ಷೆ (ಪಿ.ಯು.ಸಿ.)ಗೆ ತತ್ಸಮಾನವೆಂದು ಪರಿಗಣಿಸಬಹುದಾದ ವಿದ್ಯಾರ್ಹತೆ/ಕೋರ್ಸುಗಳು ಯಾವುವು ಎಂಬ ಬಗ್ಗೆ ಹಲವು ಇಲಾಖೆಗಳು ಸ್ಪಷ್ಟೀಕರಣವನ್ನು ಕೋರುತ್ತಿವೆ.

2) ಎಸ್.ಎಸ್.ಎಲ್.ಸಿ ನಂತರ ಪದವಿಪೂರ್ವ ಶಿಕ್ಷಣಕ್ಕೆ ಬದಲಾಗಿ ಐ.ಟಿ.ಐ ಮತ್ತು ಇತರೆ ಮೂರು ವರ್ಷದ ಡಿಪ್ಲೊಮಾ ಕೋರ್ಸನ್ನು ಪದವಿಪೂರ್ವ ಶಿಕ್ಷಣಕ್ಕೆ(ಪಿ.ಯು.ಸಿ.ಗೆ) ತತ್ಸಮಾನವೆಂದು ನೇಮಕಾತಿಯಲ್ಲಿ ಪರಿಗಣಿಸಬಹುದಾಗಿದೆ. ಮುಕ್ತ ವಿಶ್ವವಿದ್ಯಾಲಯಗಳು ನಡೆಸುವ 10+2 ಪರೀಕ್ಷೆಯನ್ನು ನೇಮಕಾತಿಗೆ ಪರಿಗಣಿಸಬಾರದೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

2...

3) ಅನುಕಂಪದ ಆಧಾರದ ನೇಮಕಾತಿಯನ್ನು ಮಾಡಲು ಅಧಿಕಾರ ಹೊಂದಿರುವ ಎಲ್ಲಾ ಪ್ರಾಧಿಕಾರಗಳು ಈ ಅಂಶವನ್ನು ಗಮನದಲ್ಲಿಟ್ಟುಕೊಳ್ಳಬೇಕೆಂದು ಸೂಚಿಸಲಾಗಿದೆ.

(ಡಾ. ಮಂಗಳ ಜಿ ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ – ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-1, ಕೊಠಡಿ ಸಂಖ್ಯೆ 31, ವಿಧಾನ ಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)/(ಇ&ಆರ್ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
12. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
17. ಎಲ್ಲಾ ಸಚಿವರ /ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
18. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-110 011.
19. ಸಚಿವಾಲಯದ ಎಲ್ಲಾ ಶಾಖೆಗಳು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
21. ವಾರದ ರಾಜ್ಯಪತ್ರ
22. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಪದವಿಪೂರ್ವ ಶಿಕ್ಷಣ ಇಲಾಖೆಯು ನಡೆಸುವ ದ್ವಿತಿಯ ಪಿ.ಯು.ಸಿ ಪರೀಕ್ಷೆಗೆ ಖಾಸಗಿಯಾಗಿ ನೊಂದಾಯಿಸಿ ಉತ್ತೀರ್ಣರಾಗುವ ವಿದ್ಯಾರ್ಥಿಗಳು ಎರಡು ವರ್ಷದ ಪಿ.ಯು.ಸಿ ಗೆ ತತ್ಸಮಾನವೆಂದು ಘೋಷಿಸುವ ಬಗ್ಗೆ.

ಓದಲಾಗಿದೆ:- ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಇವರ ಪತ್ರ ಸಂಖ್ಯೆ:ಪಪೂಶಿಇ/ಪರೀಕ್ಷೆ/ಖಾ.ಅ.ನೋ/2014-15/ ದಿನಾಂಕ:16/09/2014

* * * * *

<u>ಪ್ರಸ್ತಾವನೆ:-</u>

ಮೇಲೆ ಓದಲಾದ ದಿನಾಂಕ:16/09/2014ರ ಪ್ರಸ್ತಾವನೆಯಲ್ಲಿ ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಇವರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ರಾಷ್ಟ್ರೀಯ ಶಿಕ್ಷಣ ನೀತಿಯನ್ವಯ ಶಿಕ್ಷಣವನ್ನು ಪಡೆಯುವುದು ಎಲ್ಲರ ಒಂದು ಸಂವಿಧಾನಿಕ ಹಕ್ಕು, ಇದನ್ನು ಉತ್ತೇಜಿಸಲು ಸರ್ಕಾರವು ಪ್ರಥಮ ಪಿ.ಯು.ಸಿಯಲ್ಲಿ ನಪಾಸಾದ, ಶಿಕ್ಷಣವನ್ನು ಮುಂದುವರೆಸಲಾಗದವರಿಗೆ ಅನುಕೂಲಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ:125 ಟಿಪಿಯು 1990 ದಿನಾಂಕ:03/07/1992 ಹಾಗೂ ಇಡಿ:159 ಟಿಪಿಯು 1996 ದಿನಾಂಕ:20/09/1996ರಲ್ಲಿ ನೇರವಾಗಿ ದ್ವಿತೀಯ ಪಿಯುಸಿಗೆ ನೊಂದಾಯಿಸಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಿರುತ್ತದೆ. ಅಂದರೆ, ಕಾರಣಾಂತರದಿಂದ ಪ್ರಥಮ ಪಿ.ಯು.ಸಿಯನ್ನು ಮುಂದುವರೆಸದ ವಿದ್ಯಾರ್ಥಿಗಳು ದ್ವಿತೀಯ ಪಿ.ಯು.ಸಿ ಪರೀಕ್ಷೆಯನ್ನು ಖಾಸಗಿಯಾಗಿ ನೋಂದಾಯಿಸಿ ಉತ್ತೀರ್ಣರಾದ ಪಕ್ಷದಲ್ಲಿ ಇವರು +2 ಹಂತವನ್ನು ಪೂರ್ಣಗೊಳಿಸಿದಂತೆ ಎಂದು ಪರಿಗಣಿಸಲಾಗುತ್ತದೆ. ಅಲ್ಲದೇ, ಈ ವಿದ್ಯಾರ್ಥಿಗಳು ದ್ವಿತೀಯ ಪಿ.ಯು.ಸಿ ರೆಗ್ಯೂಲರ್ ವಿದ್ಯಾರ್ಥಿಗಳಿಗೆ ನೀಡುವ ಪ್ರಶ್ನೆ ಪತ್ರಿಕೆಗಳನ್ನೇ ಇವರಿಗೂ ನೀಡಿ, ತತ್ಸಮಾನವಾಗಿ ಮೌಲ್ಯಮಾಪನ ಮಾಡಿ ಏಕಕಾಲದಲ್ಲಿ ಫಲಿತಾಂಶ ಪ್ರಕಟಿಸುವುದರಿಂದ ಇವರನ್ನು ಈ ಹಿಂದೆ ಸ್ನಾತಕ ಪದವಿ ಕೋರ್ಸ್‌ಗಳಿಗೆ ಪ್ರವೇಶಾವಕಾಶ ನೀಡುತ್ತಿದ್ದುದನ್ನು ಮುಂದುವರೆಸುವುದು ಸೂಕ್ತ ಎಂದು ಅಭಿಪ್ರಾಯ ನೀಡಿ, ಅದರಂತೆ ಪದವಿಪೂರ್ವ ಶಿಕ್ಷಣ ನಡೆಸುವ ದ್ವಿತೀಯ ಪಿ.ಯು.ಸಿ ಪರೀಕ್ಷೆಗೆ ಖಾಸಗಿಯಾಗಿ ನೊಂದಾಯಿಸಿ ಉತ್ತೀರ್ಣರಾಗುವ ವಿದ್ಯಾರ್ಥಿಗಳು ಎರಡು ವರ್ಷದ ಪಿ.ಯು.ಸಿ ಗೆ ತತ್ಸಮಾನವೆಂದು ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

### <u>*ಸರ್ಕಾರದ ಆದೇಶ ಸಂಖ್ಯೆ: ಇಡಿ 114 ಟಿಪಿಯು 2014 ಬೆಂಗಳೂರು,*</u>
### <u>*ದಿನಾಂಕ:13-01-2015.*</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯು ನಡೆಸುವ ದ್ವಿತೀಯ ಪಿ.ಯು.ಸಿ ಪರೀಕ್ಷೆಗೆ ನೇರವಾಗಿ ಖಾಸಗಿಯಾಗಿ ನೊಂದಾಯಿಸಿ ಪರೀಕ್ಷೆಗೆ ಹಾಜರಾಗಿ ಉತ್ತೀರ್ಣರಾಗುವ ವಿದ್ಯಾರ್ಥಿಗಳು ಎರಡು ವರ್ಷದ ಪಿ.ಯು.ಸಿ ಗೆ ತತ್ಸಮಾನವೆಂದು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ<br>ಮತ್ತು ಅವರ ಹೆಸರಿನಲ್ಲಿ,

(ಆರ್ ಸೋಮಶೇಖರ್)<br>ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),<br>ಶಿಕ್ಷಣ ಇಲಾಖೆ,(ಪದವಿ ಪೂರ್ವ)

ಇವರಿಗೆ:-

1) ಮಹಾಲೇಖಪಾಲರು, (ಎ ಅಂಡ್ ಇ) ಕರ್ನಾಟಕ, ಬೆಂಗಳೂರು.

2) ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ 18ನೇ ಕ್ರಾಸ್, ಬೆಂಗಳೂರು
3) ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ(ನಿರ್ದೇಶಕರು ಪದವಿಪೂರ್ವ ಶಿಕ್ಷಣ ಇಲಾಖೆ ಇವರ ಮೂಲಕ)
4) ರಾಜ್ಯ ಎಲ್ಲಾ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ,
5) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ,
6) ಆಪ್ತ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಯವರ ಆಪ್ತ ಶಾಖೆ, ಶಿಕ್ಷಣ ಇಲಾಖೆ,
7) ಬೆಂಗಳೂರು ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.